ಸಿ.ಸಿ. ನಂ.**292/2023**

ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹೊಸನಗರ .

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಪರಮೇಶ್ | ಪಿ.ಡಬ್ಲ್ಯೂ- **5** |
| ತಂದೆಯ ಹೆಸರು | ಃ | ಹುಚ್ಚಪ್ಪ | ಸಿ.ಡಬ್ಲ್ಯೂ- **6** |
| ವಯಸ್ಸು | ಃ | **44** ವರ್ಷ | ಪ್ರಾಮಾಣೀಕರಿಸಿದ |
| ಉದ್ಯೋಗ | ಃ | ಮುಖ್ಯ ಪೇದೆ, ರಿಪ್ಪನ್‌ಪೇಟೆ | ದಿಃ **11/02/2025** |
| ವಾಸ | ಃ | ರಿಪ್ಪನ್‌ಪೇಟೆ. | |

ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-

ನಾನು ದಿನಾಂಕ **13-07-2022** ರಿಂದ ಇಲ್ಲಿಯವರೆಗೆ ರಿಪ್ಪನ್‌ಪೇಟೆ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ **17-11-2022** ರಂದು ರಾತ್ರಿ **09-10** ಗಂಟೆ ಸಮಯದಲ್ಲಿ ಠಾಣಾ ಪ್ರಭಾರದಲ್ಲಿದ್ದಾಗ ಚಾ.ಸಾ.-**1** ಮತ್ತು **2** ರವರು **1** ನೇ ಆರೋಪಿಯನ್ನು ಗಾಂಜಾ ಸೇವನೆ ಮಾಡಿದ ವಿಚಾರವಾಗಿ ಠಾಣೆಗೆ ಕರೆದುಕೊಂಡು ಬಂದು ನಂತರ ವೈದ್ಯಕೀಯ ಮನವಿ ಪತ್ರ ತಯಾರಿಸಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಗೆ ತಪಾಸಣೆಗಾಗಿ ಕಳುಹಿಸಿಕೊಟ್ಟಿರುತ್ತೇನೆ. ನಂತರ ರಾತ್ರಿ **12-50** ಕ್ಕೆ ಚಾ.ಸಾ.-**1** ಮತ್ತು **2** ರವರು **1** ನೇ ಆರೋಪಿಯನ್ನು ಆಸ್ಪತ್ರೆಯಿಂದ ಠಾಣೆಗೆ ಕರೆದುಕೊಂಡು ಬಂದು **1** ನೇ ಆರೋಪಿ ಗಾಂಜಾ ಸೇವನೆ ಮಾಡಿರುವ ಬಗ್ಗೆ ವೈದ್ಯಕೀಯ ಪರೀಕ್ಷೆಯಿಂದ ದೃಢಪಟ್ಟಿರುತ್ತದೆ ಎಂದು ಮತ್ತು **2** ನೇ ಆರೋಪಿ ಗಾಂಜಾ

ಪೂರೈಕೆ ಮಾಡಿರುತ್ತಾರೆ ಎಂದು ಇಬ್ಬರೂ ಆರೋಪಿತರ ಮೇಲೆ ಚಾ.ಸಾ.-1 ರವರು ಕೊಟ್ಟ ದೂರನ್ನು ಸ್ವೀಕರಿಸಿ ಪ್ರಕರಣ ದಾಖಲಿಸಿ ದೂರಿನೊಂದಿಗೆ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ನಿ.ಪಿ.-3 ದೂರನ್ನು ನೋಡಿ ತನ್ನ ಸಹಿಯನ್ನು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ.-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಪ್ರಥಮ ವರ್ತಮಾನ ವರದಿಯನ್ನು ನಿ.ಪಿ.-4 ಎಂದು ಗುರುತಿಸಲಾಂಯಿತು. ನಂತರ 1 ನೇ ಆರೋಪಿಯನ್ನು ದಸ್ತಗಿರಿ ಮಾಡಿ ಆತನ ಅಣ್ಣ ಇಂಬ್ರಾನ್ ಗೆ ಮಾಹಿತಿ ನೀಡಿ 1 ನೇ ಆರೋಪಿಯ ಸ್ವಇಚ್ಛಾ ಹೇಳಿಕೆ ಪಡೆದುಕೊಂಡಿರುತ್ತೇನೆ. ನಂತರ 1 ನೇ ಆರೋಪಿಯನ್ನು ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ.

ನಂತರ ದಿನಾಂಕ 17-11-2022 ರಂದು ಕೃತ್ಯ ಸ್ಥಳಕ್ಕೆ ಭೇಟಿಕೊಟ್ಟು ಪಂಚರಾದ ಚಾ.ಸಾ.-3 ಮತ್ತು 4 ರವರ ಸಮಕ್ಷಮ ಚಾ.ಸಾ.-1 ರವರು ತೋರಿಸಿದ ಸ್ಥಳದಲ್ಲಿ ಬೆಳಿಗ್ಗೆ 10-00 ರಿಂದ 11-00 ಗಂಟೆಯವರೆಗೆ ನಿ.ಪಿ.-1 ರಂತೆ ಮಹಜರ್ ಕ್ರಮ ಜರುಗಿಸಿ ನಿ.ಪಿ.-2 ರಂತೆ ಕಚ್ಚಾ ನಕ್ಷೆ ತಯಾರಿಸಿರುತ್ತೇನೆ. ಸಾಕ್ಷಿಯು ನಿ.ಪಿ.-1

ಮತ್ತು **2** ಮಹಜರ್ ಮತ್ತು ಕಚ್ಚಾ ನಕ್ಷೆಯನ್ನು ನೋಡಿ ತನ್ನ ಸಹಿಗಳನ್ನು ಗುರುತಿಸಿದ್ದು ಸಾಕ್ಷಿಯ ಸಹಿಗಳನ್ನು ನಿ.ಪಿ.**-1**(ಡಿ) ಮತ್ತು ನಿ.ಪಿ.**-2**(ಡಿ) ಎಂದು ಗುರುತಿಸಲಾಯಿತು. ನಂತರ ಅದೇ ದಿನ ಚಾ.ಸಾ.**-2** ರಿಂದ **4** ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ **21-11-2022** ರಂದು **2** ನೇ ಆರೋಪಿಯು ಮಾನ್ಯ ಸತ್ರ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದುಕೊಂಡು ಠಾಣೆಗೆ ಹಾಜರಾಗಿದ್ದು ದಸ್ತಗಿರಿ ಕ್ರಮ ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಟ್ಟಿರುತ್ತೇನೆ.

ಮುಂದುವರಿದ ಮುಖ್ಯ ವಿಚಾರಣೆ ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಮರು ವಿಚಾರಣೆಃ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.)

(ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಹೊಸನಗರ .